ಓಎಸ್ 306/2022

ಪಿಡಬ್ಲ್ಯೂ 1

**ಸಾಕ್ಷಿಯು ದಿಃ 09.04.2026 ರಂದು ನ್ಯಾಯಾಲಯದಲ್ಲಿ ಹಾಜರಿದ್ದು ಪ್ರಮಾಣ ವಚನ ಭೋಧಿಸಲಾಯಿತು.**

**ಪಾಟೀ ಸವಾಲು: 3ನೇ ಪ್ರತಿವಾದಿಗಳ ಪರ ವಕೀಲರಿಂದ**

ನನ್ನ ಮದುವೆಯಾಗಿ ಸುಮಾರು 40 ವರ್ಷ ಕಳೆದಿರುತ್ತವೆ. ನನ್ನ ಮದುವೆ ಮಾಡುವ ಕಾಲಕ್ಕೆ ನನ್ನ ತವರು ಮನೆಯವರು ಅಷ್ಟೊಂದು ಅನೂಕುಲಸ್ಥರಾಗಿರಲಿಲ್ಲ ಎಂದರೆ ಸರಿಯಲ್ಲ. ನನ್ನ ಮದುವೆಯು ದೇವಸ್ಥಾನದಲ್ಲಿ ಆಗಿರುತ್ತದೆ, ಯಾವ ದೇವಸ್ಥಾನ ಎಂದು ನನಗೆ ಗೊತ್ತಿಲ್ಲ. ನನ್ನ ಮದುವೆ ಸಮಯದಲ್ಲಿ ಒಡವೆ ಮತ್ತು ಉಪಚಾರ ಕೊಟ್ಟು ಮದುವೆ ಮಾಡಿಕೊಟ್ಟಿದ್ದರು ಎಂದರೆ ಸರಿಯಲ್ಲ. ನನ್ನ ಮದುವೆಯನ್ನು ಸರಳವಾಗಿ ಮಾಡಿಕೊಟ್ಟಿರುತ್ತಾರೆ. ನನ್ನ ತಂದೆ ಪುಟ್ಟಣ್ಣ ರವರು ಕಾಣೆಯಾಗಿದ್ದಾರೆ ಎಂದರೆ ಸಾಕ್ಷಿಯು ಇಲ್ಲ ಮೃತಪಟ್ಟಿದ್ದಾರೆ ಎಂದು ನುಡಿಯುತ್ತಾರೆ. ನನ್ನ ತಂದೆಯು ಮನೆಯಲ್ಲಿಯೇ ಮೃತಪಟ್ಟಿರುತ್ತಾರೆ. ನನ್ನ ತಂದೆಯ ಅಂತ್ಯ ಸಂಸ್ಕಾರವನ್ನು ಮಾಡಲಾಗಿರುತ್ತದೆ. ನನ್ನ ತಂದೆ ಮೃತಪಟ್ಟಿರುವ ಬಗ್ಗೆ ಮರಣ ಪ್ರಮಾಣ ಪತ್ರವನ್ನು ಕೇಳಿ ತಂದು ಹಾಜರುಪಡಿಸುತ್ತೇನೆ. ಯಾವ ದಿನಾಂಕದಂದು ನನ್ನ ತಂದೆ ಮೃತಪಟ್ಟಿದ್ದಾರೆ ಎಂದು ಹೇಳಲಾಗುವುದಿಲ್ಲ, ಕಾರಣ ನಾನು ವಿದ್ಯಾಭ್ಯಾಸ ಮಾಡಿಲ್ಲ, ಆದರೆ ಸುಮಾರು 15 ವರ್ಷಗಳ ಹಿಂದೆ ಮೃತಪಟ್ಟಿರುತ್ತಾರೆ. ನನ್ನ ತಂದೆಯ ತಿಥಿ ಕಾರ್ಯಗಳ ಬಗ್ಗೆ ಕಾರ್ಡ್ ನ್ನು ಮಾಡಿಸಲಾಗಿದೆ. ಅದನ್ನು ಹಾಜರುಪಡಿಸಲು ತೊಂದರೆ ಇದೆಯಾ ಎಂದರೆ ಸಾಕ್ಷಿಯು ನೋಡಿ ಹೇಳುತ್ತೇನೆ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಮೃತಪಟ್ಟ ನಂತರ ಮೃತ ಪಟ್ಟವರ ಫೋಟೋಗಳಲ್ಲಿ ಮೃತಪಟ್ಟ ದಿನಾಂಕವನ್ನು ನಮೂದಿಸಿ ಮನೆಯಲ್ಲಿ ಹಾಕಿರುತ್ತಾರೆ ಎಂದರೆ ಸಾಕ್ಷಿಯು ನಮ್ಮ ಮನೆಯಲ್ಲಿ ಫೋಟೋ ಇಲ್ಲ ಎಂದು ನುಡಿಯುತ್ತಾರೆ. ನನ್ನ ತಂದೆ ಪುಟ್ಟಣ್ಣ ರವರು ಮೃತಪಟ್ಟಿಲ್ಲ ಕಾಣೆಯಾಗಿದ್ದಾರೆ ಎಂದರೆ ಸರಿಯಲ್ಲ. ಆ ಕಾರಣದಿಂದ ಅವರ ಫೋಟೋವನ್ನು ನಮ್ಮ ಮನೆಯಲ್ಲಿ ಇಟ್ಟುಕೊಂಡಿಲ್ಲ ಎಂದರೆ ಸರಿಯಲ್ಲ.

2. ನಿಮ್ಮ ತಾಯಿ 1ನೇ ಪ್ರತಿವಾದಿ ದೇವಮ್ಮ ರವರನ್ನು ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಮಾಡಲು ತೊಂದರೆ ಇದೆಯಾ ಎಂದರೆ ಸಾಕ್ಷಿಯು ಹೇಳಿದರೆ ಕರೆದುಕೊಂಡು ಬಂದು ವಿಚಾರಣೆ ಮಾಡಿಸುತ್ತೇನೆ ಎಂದು ನುಡಿಯುತ್ತಾರೆ. ನಿಮ್ಮ ತಂದೆ ಕಾಣೆಯಾಗಿರುವ ಬಗ್ಗೆ ನಿಮ್ಮ

ತಾಯಿ 1ನೇ ಪ್ರತಿವಾದಿಯು ದೂರು ಕೊಟ್ಟಿದ್ದಾರಾ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ನನ್ನ ತವರೂರು ದೊಡ್ಡಹುಂಡಿ ಗ್ರಾಮವಾಗಿರುತ್ತದೆ. ದೊಡ್ಡಹುಂಡಿ ಗ್ರಾಮದ ಜನರೆಲ್ಲರು ನನ್ನ ತಂದೆ ಕಾಣೆಯಾಗಿದ್ದಾರೆ ಎಂದು ತಿಳಿದುಕೊಂಡಿದ್ದಾರೆ ಎಂದರೆ ಸಾಕ್ಷಿಯು ಇಲ್ಲ ಅವರು ಕಾಣೆಯಾಗಿಲ್ಲ ಮೃತಪಟ್ಟಿದ್ದಾರೆ ಎಂದು ನಾನು ಹೇಳುತ್ತಿದ್ದಿನಲ್ಲ ಎಂದು ನುಡಿಯುತ್ತಾರೆ. ನನ್ನ ತಂದೆ ಮೃತಪಟ್ಟಿದ್ದಾರೆ ಎಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಂದೆ ಬದುಕಿದ್ದಾರೋ ಇಲ್ಲವೋ ಎಂದು ನಿಖರವಾಗಿ ಯಾರಿಗೂ ಗೊತ್ತಿಲ್ಲ ಎಂದರೆ ಸಾಕ್ಷಿಯು ನನ್ನ ತಂದೆ ಮೃತಪಟ್ಟಿದ್ದಾರೆ ಎಂದು ನಾನು ಹೇಳುತ್ತಿದ್ದಿನಲ್ಲ ಎಂದು ನುಡಿಯುತ್ತಾರೆ. ನನ್ನ ತಂದೆಯನ್ನು ಮಂಚನಕಟ್ಟೆ ಹೊಲದಲ್ಲಿ ಶವ ಸಂಸ್ಕಾರ ಮಾಡಿರುತ್ತೇವೆ. ನನ್ನ ತಂದೆಯ ಸಮಾಧಿಯನ್ನು ಕಟ್ಟಿಸಿರುವುದಿಲ್ಲ. ನನ್ನ ತಂದೆ ಪುಟ್ಟಣ್ಣ ರವರು ಮೃತಪಡದಿದ್ದರೂ ಸಹ ಮೃತಪಟ್ಟಿದ್ದಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮುಂದುವರೆದ ಪಾಟೀ ಸವಾಲುಃ** ಪ್ರತಿವಾದಿ ಪರ ವಕೀಲರು ಸಮಯ ಕೋರಿದ್ದು ಮುಂದೂಡಲಾಯಿತು

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ದೀಪು ಎಂ.ಟಿ.)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಂಡ್ಲುಪೇಟೆ

ಓಎಸ್ 306/2022

ಪಿಡಬ್ಲ್ಯೂ 1